Azadi Ka Amrit Mahotsav

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಗದಗ

## ಅಧಿಸೂಚನೆ ಸಂಖ್ಯೆ.ಎಡಿಎಮ್- 1/ 2022 ದಿನಾಂಕ 24.03.2022

ವಿಷಯ : ಶೀಘ್ರಲಿಪಿಗಾರ ಗ್ರೇಡ್-3, ಬೆರಳಚ್ಚುಗಾರ, ಆದೇಶಿಕ ಜಾರಿಕಾರ ಮತ್ತು ಜವಾನರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:
1. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರುರವರ ಪತ್ರ ಸಂಖ್ಯೆ. ಡಿಜೆಎ-II (ಎಲ್‌ಸಿಎ-II) 128/2012, ದಿನಾಂಕ 13-02-2017, 18.09.2018 ಮತ್ತು 27.01.2022.
2. ಈ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ 6/2019, ದಿನಾಂಕ 30.11.2019
3. ಈ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ 1/2020, ದಿನಾಂಕ 09.03.2020
4. ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಎಲ್‌ಎಡಬ್ಲ್ಯು-166 ಎಲ್‌ಎಸಿ-2015, ದಿನಾಂಕ 06.03.2021 (ಕರ್ನಾಟಕ ಅಧೀನ ನ್ಯಾಯಾಲಯಗಳ) (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇರ ನೇಮಕಾತಿ) (ತಿದ್ದುಪಡಿ) ನಿಯಮಗಳು-2021).
5. ಕಛೇರಿ ಟಿಪ್ಪಣಿ ಹಾಗೂ ಅದರ ಮೇಲಿನ ಆದೇಶಗಳು.

*****

ಗದಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ನ್ಯಾಯಾಲಯಗಳಲ್ಲಿ ಪ್ರಸ್ತುತ ಖಾಲಿ ಇರುವ ಶೀಘ್ರಲಿಪಿಗಾರ ಗ್ರೇಡ್-೩, ಬೆರಳಚ್ಚುಗಾರ, ಆದೇಶಿಕ ಜಾರಿಕಾರ ಮತ್ತು ಜವಾನರ ಹುದ್ದೆಗಳಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ (online) ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳು ಗದಗ ಜಿಲ್ಲಾ ನ್ಯಾಯಾಲಯದ ಜಾಲತಾಣ (website) https://districts.ecourts.gov.in/gadag-online-recruitment ಈ ಲಿಂಕ್‌ನ್ನು ಬಳಸಿಕೊಳ್ಳುವುದರ ಮೂಲಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು, ಅರ್ಜಿ ಸಲ್ಲಿಸುವ ದಿನಾಂಕ ಹಾಗೂ ಕೊನೆಯ ದಿನಾಂಕದ ವಿವರ ಈ ಕೆಳಗಿನಂತಿರುತ್ತದೆ.

| | | |
|---|---|---|
| 1 | ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 01.04.2022 |
| 2 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 30.04.2022<br>ರಾತ್ರಿ 11.59 ಘಂಟೆಯವರೆಗೆ ಮಾತ್ರ |
| 3 | ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾನಲ್ಲಿ ಚಲನ್ ಮೂಲಕ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 05.05.2022 |

## I. ಖಾಲಿ ಹುದ್ದೆಗಳ ಸಂಖ್ಯೆ ಹಾಗೂ ವರ್ಗೀಕರಣ :

### i) ಶೀಘ್ರಲಿಪಿಗಾರ ಗ್ರೇಡ್ - 3 ಹುದ್ದೆ ಸಂಖ್ಯೆ: 01

ವೇತನ ಶ್ರೇಣಿ : ರೂ. Rs.27650-650-29600-750-32600-850-36000-950-39800-1100-46400-1250-52650 ಮತ್ತು ಇತರೆ ಭತ್ಯೆಗಳು.

ಹುದ್ದೆಗಳ ವರ್ಗೀಕರಣ :

| ವರ್ಗೀಕರಣ | ಮಹಿಳಾ ಅಭ್ಯರ್ಥಿ |
|---|---|
| ಪ್ರವರ್ಗ 2ಎ | 01 |
| ಒಟ್ಟು | 01 |

### ii). ಬೆರಳಚ್ಚುಗಾರರು ಹುದ್ದೆಗಳ ಸಂಖ್ಯೆ : 01

ವೇತನ ಶ್ರೇಣಿ : ರೂ. 21400-500-22400-550-24600-600-27000-650-29600-750-32600-850-36000-950-39800-1100-42000 ಮತ್ತು ಇತರೆ ಭತ್ಯೆಗಳು.

ಹುದ್ದೆಗಳ ವರ್ಗೀಕರಣ :

| ವರ್ಗೀಕರಣ | ಗ್ರಾಮೀಣ ಅಭ್ಯರ್ಥಿ |
|---|---|
| ಪ್ರವರ್ಗ - 1 | 01 |
| ಒಟ್ಟು | 01 |

### iii). ಆದೇಶ ಜಾರಿಕಾರ ಹುದ್ದೆಗಳ ಸಂಖ್ಯೆ : 01

ವೇತನ ಶ್ರೇಣಿ : ರೂ. 19950-450-20400-500-22400-550-24600-600-27000-650-29600-750-32600-850-36000-950-37900 ಮತ್ತು ಇತರೆ ಭತ್ಯೆಗಳು.

ಹುದ್ದೆಗಳ ವರ್ಗೀಕರಣ :

| ವರ್ಗೀಕರಣ | ಮಹಿಳಾ ಅಭ್ಯರ್ಥಿ |
|---|---|
| ಸಾಮಾನ್ಯ ವರ್ಗ | 01<br>(ಚಲನ ವಲನ ವೈಕಲ್ಯ) |
| ಒಟ್ಟು | 01 |

### iv). ಜವಾನ ಹುದ್ದೆಗಳ ಸಂಖ್ಯೆ : 08

ವೇತನ ಶ್ರೇಣಿ : ರೂ. 17000-400-18600-450-20400-500-22400-550-24600-600-27000-650-28950 ಮತ್ತು ಇತರೆ ಭತ್ಯೆಗಳು.

ಹುದ್ದೆಗಳ ವರ್ಗೀಕರಣ :

| ವರ್ಗೀಕರಣ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕ | ಅಂಗವಿಕಲ | ಒಟ್ಟು |
|---|---|---|---|---|---|---|
| ಪರಿಶಿಷ್ಟ ಜಾತಿ | -- | 01 | -- | -- | -- | 01 |
| ಪ್ರವರ್ಗ-2ಎ | -- | 01 | -- | -- | -- | 01 |
| ಪ್ರವರ್ಗ-3ಎ | -- | -- | -- | -- | 01 ದೃಷ್ಟಿಮಾಂಧ್ಯ (Low vision) | 01 |
| ಪ್ರವರ್ಗ-3ಬಿ | -- | 01 | -- | -- | -- | 01 |
| ಸಾಮಾನ್ಯ ವರ್ಗ | 01 | 01 | 01 | 01 | -- | 04 |
| ಒಟ್ಟು | 01 | 04 | 01 | 01 | 01 | 08 |

2. **ಶೈಕ್ಷಣಿಕ ವಿದ್ಯಾರ್ಹತೆ :**

| ಕ್ರ. ಸಂ. | ಹುದ್ದೆ | ಕನಿಷ್ಟ ಶೈಕ್ಷಣಿಕ ವಿದ್ಯಾರ್ಹತೆ |
|---|---|---|
| 1 | ಶೀಘ್ರಲಿಪಿಗಾರ ಗ್ರೇಡ್-3 | 1. ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ ಕಮರ್ಷಿಯಲ್ ಪ್ರ್ಯಾಕ್ಟಿಸ್ 3 ವರ್ಷಗಳ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.<br>2. ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ನಡೆಸಲಾದ ಹಿರಿಯ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಹಾಗೂ ಹಿರಿಯ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ಕಮರ್ಷಿಯಲ್ ಪ್ರ್ಯಾಕ್ಟಿಸ್ 3 ವರ್ಷಗಳ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ. |
| 2 | ಬೆರಳಚ್ಚುಗಾರ | 1. ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ ಕಮರ್ಷಿಯಲ್ ಪ್ರ್ಯಾಕ್ಟಿಸ್ 3 ವರ್ಷಗಳ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.<br>2. ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ನಡೆಸಲಾದ ಹಿರಿಯ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ಸೆಕ್ರೆಟರಿಯಲ್ ಪ್ರ್ಯಾಕ್ಟಿಸ್ 3 ವರ್ಷಗಳ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ. |

| | | |
|---|---|---|
| 3 | ಆದೇಶ ಜಾರಿಕಾರರು | 1. ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.<br>2. ಡ್ರೈವಿಂಗ್ ಲೈಸೆನ್ಸ್‌ನ್ನು ಹೊಂದಿದ ಅಭ್ಯರ್ಥಿಗೆ ಆದ್ಯತೆ ನೀಡಲಾಗುವುದು |
| 4 | ಜವಾನ | 1. 10ನೇ ತರಗತಿಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.<br>2. ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು. |

## 3. ವಯೋಮಿತಿಃ

ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಈ ಕೆಳಕಂಡ ವಯೋಮಿತಿಯನ್ನು ಹೊಂದಿರತಕ್ಕದ್ದು.

| ಕ್ರ. ಸಂ. | ಅಭ್ಯರ್ಥಿಯ ಪ್ರವರ್ಗ | ಕನಿಷ್ಟ ವಯೋಮಿತಿ | ಗರಿಷ್ಟ ವಯೋಮಿತಿ |
|---|---|---|---|
| 1 | ಸಾಮಾನ್ಯ ವರ್ಗ | 18 ವರ್ಷಗಳು | 35 ವರ್ಷಗಳು |
| 2 | ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ | 18 ವರ್ಷಗಳು | 38 ವರ್ಷಗಳು |
| 3 | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 | 18 ವರ್ಷಗಳು | 40 ವರ್ಷಗಳು |

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಮತ್ತು ಅಂಗವಿಕಲರಿಗೆ ನಿಯಮಗಳ ಅನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

## 4. ನಿಗದಿಪಡಿಸಿದ ಅರ್ಜಿ ಶುಲ್ಕ ಃ

| ಕ್ರ. ಸಂ. | ಅಭ್ಯರ್ಥಿಯ ಪ್ರವರ್ಗ | ನಿಗದಿಪಡಿಸಿದ ಶುಲ್ಕ |
|---|---|---|
| 1 | ಸಾಮಾನ್ಯ ವರ್ಗ | ರೂ. 100/ |
| 2 | ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ ಸೇರಿದ ಅಭ್ಯರ್ಥಿಗಳಿಗೆ | ರೂ. 100/ |
| 3 | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯತಿ ಇರುತ್ತದೆ. |

ನಿಗದಿತ ಶುಲ್ಕವನ್ನು ನ್ಯಾಯಾಲಯದ ಜಾಲತಾಣ (website) https://districts.ecourts.gov.in/gadag-online-recruitment ನೇದರಲ್ಲಿ ನಿಡಲಾದ ಲಿಂಕ್ ಮೂಲಕ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಮೂಲಕ Online payment through net banking/ credit card/ debit card/ challan download ಸೌಲಭ್ಯದ ಮೂಲಕ

ಪಾವತಿಸತಕ್ಕದ್ದು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ಜಾಲತಾಣದಿಂದ ಡೌನ್‌ಲೋಡ್ ಮಾಡಿ ಅದರ ಮುದ್ರಿತ ಪ್ರತಿಯನ್ನು ಪಡೆದುಕೊಂಡು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದೇ ಶಾಖೆಗೆ ಹಾಜರಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್/ ಪೋಸ್ಟಲ್ ಆರ್ಡರ್/ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

5. **ಆಯ್ಕೆ ವಿಧಾನ :**

ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟ್ರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ)(ತಿದ್ದುಪಡಿ) ನಿಯಮಗಳು 2007 ಮತ್ತು 2021 ರ ಅನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

| ಕ್ರ. ಸಂ. | ಹುದ್ದೆ | ಆಯ್ಕೆಯ ವಿಧಾನ |
|---|---|---|
| 1 | ಶೀಘ್ರಲಿಪಿಗಾರ ಗ್ರೇಡ್-3 | ಶೀಘ್ರಲಿಪಿಗಾರ ಹುದ್ದೆಗೆ ಒಂದು ನಿಮಿಷಕ್ಕೆ 120 ಶಬ್ದಗಳಂತೆ 5 ನಿಮಿಷ ಉಕ್ತಲೇಖನವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನೀಡಲಾಗುವುದು ಅದನ್ನು ಲಿಪ್ಯಂತರಗೊಳಿಸಿ ಬೆರಳಚ್ಚು ಮಾಡಲು 45 ನಿಮಿಷ ಕಾಲಾವಕಾಶ ಕೊಡಲಾಗುವುದು. ಇದಕ್ಕೆ 100 ಅಂಕಗಳನ್ನು ನಿಗದಿಪಡಿಸಲಾಗಿದೆ. ಸಂದರ್ಶನಕ್ಕೆ ಅರ್ಹತೆ ಹೊಂದಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು. ಅಭ್ಯರ್ಥಿಯು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹಿರಿಯ ಕನ್ನಡ ಮತ್ತು ಆಂಗ್ಲ ಬೆರಳಚ್ಚು, ಶೀಘ್ರಲಿಪಿ ಪರೀಕ್ಷೆಗಳಲ್ಲಿ ಮತ್ತು ಈ ಪ್ರಾಧಿಕಾರ ನಡೆಸುವ ಶೀಘ್ರಲಿಪಿ ಮತ್ತು ಬೆರಳಚ್ಚು ಪರೀಕ್ಷೆಗಳಲ್ಲಿ ಪಡೆದ ಅಂಕಗಳ ಸರಾಸರಿ ಆಧಾರದ ಮೇಲೆ ಒಂದು ಹುದ್ದೆಗೆ 5 ರಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ಒಟ್ಟು 5 ಅಂಕಗಳನ್ನು ನಿಗದಿಪಡಿಸಲಾಗಿದೆ. ಅಭ್ಯರ್ಥಿಯು ಹುದ್ದೆಗೆ ನಿಗದಿಪಡಿಸಿದ ಕನಿಷ್ಟ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳು ಈ ಪ್ರಾಧಿಕಾರವು ನಡೆಸಲಾದ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಹಾಗೂ ಬೆರಳಚ್ಚು ಪರೀಕ್ಷೆಯಲ್ಲಿ ಪಡೆದ ಅಂಕಗಳು ಮತ್ತು ಸಂದರ್ಶನದಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. |
| 2 | ಬೆರಳಚ್ಚುಗಾರ | ಬೆರಳಚ್ಚುಗಾರ ಹುದ್ದೆಗೆ ಬೆರಳಚ್ಚು ಮಾಡಲು 15 ನಿಮಿಷ ಉಕ್ತಲೇಖನವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನೀಡಲಾಗುವುದು. ಇದಕ್ಕೆ 100 ಗರಿಷ್ಟ ಅಂಕಗಳನ್ನು ನಿಗದಿಪಡಿಸಲಾಗಿದೆ. ಅರ್ಹತೆ ಹೊಂದಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು. ಅಭ್ಯರ್ಥಿಯು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ, ಹಿರಿಯ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಗಳಲ್ಲಿ ಹಾಗೂ ಈ ಪ್ರಾಧಿಕಾರ ನಡೆಸುವ ಬೆರಳಚ್ಚು |

| | | |
|---|---|---|
| | | ಪರೀಕ್ಷೆಗಳಲ್ಲಿ ಪಡೆದ ಅಂಕಗಳ ಸರಾಸರಿ ಆಧಾರದ ಮೇಲೆ ಒಂದು ಹುದ್ದೆಗೆ 1:5 ಅನುಪಾತದಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಅಭ್ಯರ್ಥಿಯು ಹುದ್ದೆಗೆ ನಿಗದಿಪಡಿಸಿದ ಕನಿಷ್ಠ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳು, ಈ ಪ್ರಾಧಿಕಾರವು ನಡೆಸುವ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಸಂದರ್ಶನದಲ್ಲಿ ಪಡೆದ ಅಂಕಗಳ ಸರಾಸರಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗವುದು. |
| 3 | ಆದೇಶ ಜಾರಿಕಾರ | ಆದೇಶ ಜಾರಿಕಾರ ಹುದ್ದೆಗೆ ಅಭ್ಯರ್ಥಿಯು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 1:25 ಅನುಪಾತದಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ಒಟ್ಟು 10 ಅಂಕಗಳನ್ನು ನಿಗದಿಪಡಿಸಲಾಗಿದೆ. ಸಂದರ್ಶನದಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಅಯ್ಕೆ ಮಾಡಲಾಗುವುದು. ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಸಂದರ್ಶನಕ್ಕೆ ಕರೆಯಲು ಮಾತ್ರ ಪರಿಗಣಿಸಲಾಗುವುದು. |
| 4 | ಜವಾನ | ಜವಾನ ಹುದ್ದೆಗಳಿಗೆ ಅಭ್ಯರ್ಥಿಗಳು 10ನೇ ತರಗತಿಯಲ್ಲಿ ಪಡೆದ ಸರಾಸರಿ ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 1:10 ಅನುಪಾತದಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ಒಟ್ಟು 10 ಅಂಕಗಳನ್ನು ನಿಗದಿಪಡಿಸಲಾಗಿದೆ. ಸಂದರ್ಶನದಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಅಯ್ಕೆ ಮಾಡಲಾಗುವುದು. ಅಭ್ಯರ್ಥಿಗಳು 10ನೇ ತರಗತಿಯಲ್ಲಿ ಪಡೆದ ಅಂಕಗಳನ್ನು ಸಂದರ್ಶನಕ್ಕೆ ಕರೆಯಲು ಮಾತ್ರ ಪರಿಗಣಿಸಲಾಗುವುದು. |

## ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ವಿಧಾನ :

1) ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವ ಮೊದಲು ಈ ಕೆಳಗೆ ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು, ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು ಮತ್ತು ತಪ್ಪಾಗದಂತೆ ನೋಡಿಕೊಳ್ಳತಕ್ಕದ್ದು, ಸರಿಯಾದ ಮಾಹಿತಿ ನೀಡದೆ ಇರುವ ಹಾಗೂ ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2) ಅಭ್ಯರ್ಥಿಗಳು ಒಮ್ಮೆ ತಮ್ಮ ಅರ್ಜಿಯಲ್ಲಿ ನಮೂದಿಸಿದ ಜನ್ಮ ದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳಲ್ಲಿ ಯಾವುದೇ ಬದಲಾವಣೆಗೆ ತಂತ್ರಾಂಶದಲ್ಲಿ ಅವಕಾಶ ಇಲ್ಲದ್ದೇ ಇರುವುದ್ದರಿಂದ ಈ ಕುರಿತಂತೆ ತದನಂತರದಲ್ಲಿ ಬರುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

3) ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಮಿಂಚಂಚೆ (ಇ-ಮೇಲ್) ವಿಳಾಸ ಹೊಂದಿದ್ದಲ್ಲಿ ನಮೂದಿಸುವುದು.

4) ಅಭ್ಯರ್ಥಿಯು ಇತ್ತೀಚಿನ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) 50 ಕೆ.ಬಿ ಗಾತ್ರದ 5 ಸೆಂ.ಮೀ. x 3.6 ಸೆಂ.ಮೀ. ಅಳತೆಯುಳ್ಳ ಇತ್ತೀಚಿನ ಬಿಳಿಯ ಹಿನ್ನಲೆಯುಳ್ಳ ಭಾವಚಿತ್ರವನ್ನು .jpg ನಮೂನೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ ಅಪಲೋಡ್ ಮಾಡತಕ್ಕದ್ದು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡತಕ್ಕದ್ದಲ್ಲ).

ಆ) 26 ಕೆ.ಬಿ. ಗಾತ್ರದ 2.5 ಸೆಂ.ಮೀ. x 7.5 ಸೆಂ.ಮೀ. ಅಳತೆಯುಳ್ಳ ಬಿಳಿ ಹಾಳೆಯ ಮೇಲೆ ಕಪ್ಪುಬಣ್ಣದ ಶಾಯಿಯ ಬಾಲ್‌ಪಾಯಿಂಟ್ ಪೆನ್ನಿನಿಂದ ಸಹಿ ಮಾಡಿ (.jpg ನಮೂನೆಯಲ್ಲಿ) ಅರ್ಜಿಗೆ ಅಪ್‌ಲೋಡ್ ಮಾಡತಕ್ಕದ್ದು.

5) ಅಭ್ಯರ್ಥಿಯು ಆನ್‌ಲೈನ್‌ನ ಅರ್ಜಿಯಲ್ಲಿ ಕೆಳಲಾದ ಎಲ್ಲಾ ಅಂಕಣಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮಕೈಗೊಳ್ಳುವುದು. ನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ಭರಣಾ ಮಾಡಿದ ಬಗ್ಗೆ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಸಂದರ್ಶನ/ ದಾಖಲಾತಿ ಪರಿಶೀಲನೆ/ ಈ ಕಛೇರಿಯು ಅಪೇಕ್ಷಿಸಿದ ಸಮಯದಲ್ಲಿ ಹಾಜರಪಡಿಸತಕ್ಕದ್ದು.

6) ಅಭ್ಯರ್ಥಿಯು ಅರ್ಜಿ ಶುಲ್ಕವನ್ನು ಪಾವತಿಸಿದ ಬಗ್ಗೆ ಖಚಿತ ಪಡಿಸಲು, ಶುಲ್ಕ ಪಾವತಿಸಿದ ಬಗ್ಗೆ ರಶೀದಿ/ ಚಲನ್ ಪ್ರತಿಯನ್ನು ಈ ನ್ಯಾಯಾಲಯದ ಜಾಲತಾಣದಲ್ಲಿ ವಿವರಿಸಿದ ವಿಧಾನದಂತೆ "Upload" ಮಾಡತಕ್ಕದ್ದು.

7) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ವಿವರಗಳನ್ನು ಸರಿಯಾಗಿ ನಮೂದಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಂಡ ನಂತರವೇ ಮಾತ್ರ "submit button press" ಮಾಡತಕ್ಕದ್ದು.

8) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ **30-04-2022** ರವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸುವುದು ಸೂಕ್ತ, ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ ಹಾಗೂ ಬೇರೆ ಯಾವುದೇ ನೇಮಕಾತಿಗೂ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.

9) ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕ **05.05.2022** ಕೊನೆಯ ದಿನವಾಗಿದ್ದು, ನಿಗದಿತ ಅವಧಿಯೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದೇ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

10) ಅರ್ಹತಾ ಪರೀಕ್ಷೆ/ ಸಂದರ್ಶನದ ವೇಳಾಪಟ್ಟಿಯನ್ನು ನ್ಯಾಯಾಲಯದ ಜಾಲತಾಣ (website) https://districts.ecourts.gov.in/gadag-online-recruitment ನೇದ್ದರಲ್ಲಿ ಪ್ರಕಟಿಸಲಾಗುವುದು. ಇದನ್ನು ಹೊರತುಪಡಿಸಿ ಪ್ರತ್ಯೇಕವಾಗಿ ಯಾವುದೇ ಕರೆಯೋಲೆಗಳನ್ನು ಅಭ್ಯರ್ಥಿಗಳಿಗೆ ಈ ಕಛೇರಿಯಿಂದ ರವಾನಿಸಲಾಗುವುದಿಲ್ಲ. ಸಂದರ್ಶನಕ್ಕೆ/ ಅರ್ಹತಾ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಹತಾ ಪರೀಕ್ಷೆ/ ಸಂದರ್ಶನದ ದಿನಾಂಕವನ್ನು ತಿಳಿದುಕೊಳ್ಳಲು ಈ ನ್ಯಾಯಾಲಯದ ಜಾಲತಾಣವನ್ನು ಮೇಲಿಂದ ಮೇಲೆ ಗಮನಿಸತಕ್ಕದ್ದು.

11) ಈ ಕಛೇರಿಯಿಂದ ನಡೆಸುವ ಅರ್ಹತಾ ಪರೀಕ್ಷೆ/ ಸಂದರ್ಶನದ ಬಗ್ಗೆ ಮಾಹಿತಿಯನ್ನು ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಗೊತ್ತುಪಡಿಸಿದ ಚರವಾಣಿ (mobile) ಸಂಖ್ಯೆಗೆ ವಿದ್ಯುನ್ಮಾನ ಸಂದೇಶದ (sms ಅಥವಾ e-mail) ಮೂಲಕ ತಿಳಿಸಲಾಗುವುದು. ಒಂದು ವೇಳೆ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ನೇಮಕಾತಿ ಪ್ರಾಧಿಕಾರ ಹೊಣೆಯಾಗುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ನ್ಯಾಯಾಲಯದ ಜಾಲತಾಣ (website) https://districts.ecourts.gov.in/gadag-online-recruitment ನೇದ್ದನ್ನು ವೀಕ್ಷಿಸಿ ಅರ್ಹತಾ ಪರೀಕ್ಷೆ/ ಸಂದರ್ಶನದ ಬಗ್ಗೆ ಮಾಹಿತಿಯನ್ನು ತಿಳಿದುಕೊಂಡು, ತಮ್ಮ ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಚುನಾವಣಾ ಗುರುತಿನ ಚೀಟಿ/ ಆಧಾರ್ ಕಾರ್ಡ್ / ವಾಹನ ಚಾಲನಾ ಪರವಾನಿಗೆ ಪತ್ರ/ ಪಾನ್‌ಕಾರ್ಡ್ / ಪಾಸ್‌ಪೋರ್ಟ್) ಅರ್ಹತಾ ಪರೀಕ್ಷೆ / ಸಂದರ್ಶನಕ್ಕೆ ಹಾಜರಾಗತಕ್ಕದ್ದು.

**ಸಾಮಾನ್ಯ ಸೂಚನೆಗಳು :**

ಅಭ್ಯರ್ಥಿಗಳು ಸಂದರ್ಶನ/ ದಾಖಲಾತಿ ಪರಿಶೀಲನೆ / ಈ ಕಛೇರಿಯು ಸಂದರ್ಭಾನುಸಾರ ಅಪೇಕ್ಷಿಸಿದ್ದ ಸಮಯದಲ್ಲಿ ಈ ಕೆಳಕಂಡ ಮೂಲ ದಾಖಲಾತಿಗಳನು ಹಾಜರುಪಡಿಸತಕ್ಕದ್ದು.

1. ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ.
2. ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ.
3. ಆಯಾ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿಗಳು.
4. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಸೇರಿದ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಪ್ರಮಾಣಪತ್ರಗಳು.
5. ಅಂಗವಿಕಲ (ವಿಕಲಚೇತನ) ಮೀಸಲಾತಿ ಕೋರುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಪಡೆದ ವೈದ್ಯಕೀಯ ಪ್ರಮಾಣಪತ್ರ.
6. ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ-98/ಸೇನೆನಿ/2005, ದಿನಾಂಕ 10.08.2005 ರ ಪ್ರಕಾರ ನಿಗದಿತ ನಮೂನೆ 2 ರಲ್ಲಿ ಸಂಬಂಧಪಟ್ಟ ಶಾಲೆಯಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿಸಿದ ಪ್ರಮಾಣಪತ್ರ.

7. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ 2 ರ ಮೀಸಲಾತಿ ಪ್ರಮಾಣಪತ್ರದ ಜೊತೆಗೆ ನಮೂನೆ 1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ (Creamylayer) ಬಗ್ಗೆ ತಹಶೀಲ್ದಾರರವರಿಂದ ಪಡೆದ ಪ್ರಮಾಣಪತ್ರ.

8. ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 30-04-2022 ದಿಂದ 6 ತಿಂಗಳ ಒಳಗಿರುವ ಹಾಗೂ ಅರ್ಜಿದಾರರಿಗೆ ಸಂಬಂಧಿಕರಲ್ಲದ ಇಬ್ಬರು ಗಣ್ಯ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರಗಳು.

9. ಅಭ್ಯರ್ಥಿಯು ಅಭ್ಯಸಿಸಿದ ಶಾಲೆ / ವಿದ್ಯಾಲಯದಿಂದ ಪಡೆದ ನಡತೆ ಪ್ರಮಾಣಪತ್ರ.

10. ಅಭ್ಯರ್ಥಿಯು ಕೋರಿರುವ ಮೀಸಲಾತಿಗಳನ್ನು (ಯೋಜನಾ ನಿರಾಶ್ರಿತ, ಮಾಜಿ ಸೈನಿಕ ಇತ್ಯಾದಿ) ಖಾತ್ರಿಪಡಿಸಲು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಪ್ರಮಾಣಪತ್ರ / ಸೂಕ್ತ ದಾಖಲೆ.

11. ಆದೇಶ ಜಾರಿಕಾರ ಮತ್ತು ಜವಾನ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳಿಗೆ, ಎಸ್‌ಎಸ್‌ಎಲ್‌ಸಿ ಅಥವಾ 10ನೇ ತರಗತಿಯಲ್ಲಿ ಪಡೆದ ಸರಾಸರಿ ಅಂಕಗಳ ಆಧಾರದ ಮೇಲೆ ಸಂದರ್ಶನದ ಅರ್ಹತಾ ಪಟ್ಟಿಯನ್ನು ತಯಾರಿಸಬೇಕಾಗಿರುವುದರಿಂದ ಶ್ರೇಣಿಗಳನ್ನು (ಗ್ರೇಡಿಂಗ್) ಹೊಂದಿದ ಅಂಕಪಟ್ಟಿ ಇರುವ ಅಭ್ಯರ್ಥಿಗಳು ಅದನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ನಿಖರವಾದ ಅಂಕಗಳನ್ನು ಪ್ರತಿಶತವನ್ನಾಗಿ (ಶೇಕಡಾವನ್ನಾಗಿ) ಪರಿವರ್ತಿಸಕೊಳ್ಳತಕ್ಕದ್ದು. ಹಾಗೆ ಪರಿವರ್ತಿಸಿಕೊಂಡ ಅಂಕಗಳು ಹಾಗೂ ಪ್ರತಿಶತ ಮಾತ್ರ ಆನ್‌ಲೈನ್ ಅರ್ಜಿಯಲ್ಲಿ ನಮೂದಿಸತಕ್ಕದ್ದು. ನಿಖರವಾಗಿ ಪಡೆದ ಅಂಕಗಳನ್ನು ಕ್ರೋಢಿಕರಿಸಿ ತಯಾರಿಸಲಾದ ಅಂಕಪಟ್ಟಿಯನ್ನು ಸಂದರ್ಶನ/ ಈ ಕಛೇರಿ ಅಪೇಕ್ಷಿಸಿದಲ್ಲಿ ಹಾಜರಪಡಿಸತಕ್ಕದ್ದು. ಒಂದು ವೇಳೆ ಶ್ರೇಣಿಗಳನ್ನೊಳಗೊಂಡ ಅಂಕಪಟ್ಟಿಯನ್ನು ಸಂದರ್ಶನದ ಸಮಯದಲ್ಲಿ ಹಾಜರಪಡಿಸದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಪರಿಗಣಿಸಲಾಗುವುದಿಲ್ಲ.

12. ಜನ್ಮ ದಿನಾಂಕವನ್ನು ದೃಢೀಕರಿಸಲು ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣಪತ್ರವನ್ನು ಹಾಜರಪಡಿಸತಕ್ಕದ್ದು.

13. ಅರ್ಹತಾ ಪರೀಕ್ಷೆ ಮತ್ತು ಸಂದರ್ಶನಕ್ಕಾಗಿ ಅಹ್ವಾನಿಸಿ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗತಕ್ಕದ್ದು.

14. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸಬೇಕು ಮತ್ತು ಪ್ರತಿಯೊಂದು ಅರ್ಜಿಗೆ ಪ್ರತ್ಯೇಕವಾಗಿ ಶುಲ್ಕವನ್ನು ಭರಣಾ ಮಾಡಬೇಕು.

15. ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ನಿಯಮಗಳಂತೆ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿಡಲಾಗುವುದು.

16. ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಪ್ರಮಾಣಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರತಕ್ಕದ್ದು ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.

17. ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಈ ಅಧಿಸೂಚನೆಯಲ್ಲಿ ಅಧಿಸೂಚಿಸಿದ ಹುದ್ದೆಗಳಿಗೆ ಆಯ್ಕೆಯಾದ ಪಕ್ಷದಲ್ಲಿ ಆಯ್ಕೆಪಟ್ಟಿ ಪ್ರಕಟವಾದ 30 ದಿನಗಳೊಳಗಾಗಿ ಪಡೆಯತಕ್ಕದ್ದು.
18. ಅಭ್ಯರ್ಥಿಗಳು ಅಭ್ಯರ್ಥಿಕೆಯ ಸಂಬಂಧದಲ್ಲಿ ಅಧಿಕಾರಿಗಳಿಂದ ಅಥವಾ ಅಧೀಕಾರೇತರರಿಂದ ಯಾವುದೇ ರೀತಿಯ ಬಾಹ್ಯ ಬೆಂಬಲವನ್ನು ಪಡೆಯುವ ಪತ್ರಯ್ನ ಮಾಡಿದಲ್ಲಿ ಅಂತಹ ಅಭ್ಯರ್ಥಿಗಳನ್ನು ಯಾವುದೇ ಮೂನ್ಸೂಚನೆ ನೀಡದೆ ಅನರ್ಹಗೊಳಿಸಲಾಗುವುದು.
19. ಅಧಿಸೂಚನೆಯಲ್ಲಿ ನಮೂದಿಸಿದ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲೆಗಳು ಮತ್ತು ವಿವಿಧ ಮೀಸಲಾತಿಗಳಿಗೆ ಪಡೆದುಕೊಂಡ ಪ್ರಮಾಣಪತ್ರಗಳು, ಪರಿಶೀಲನೆ ಸಮಯದಲ್ಲಿ ಸುಳ್ಳೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿಕೆಯು ರದ್ದಾಗುತ್ತದೆ ಮತ್ತು ಅಂತಹವರ ವಿರುದ್ಧ ತಪ್ಪು ಮಾಹಿತಿಯನ್ನು ಒದಗಿಸುವುದಕ್ಕೆ ಸಂಬಂಧಿಸಿದಂತೆ ಅಪರಾಧಿಕ ಪ್ರಕರಣವನ್ನು ಜರುಗಿಸಲಾಗುವುದು.
20. ವಿಕಲಚೇತನರು/ ಮಾಜಿಸೈನಿಕರು/ ವಿಧವೆಯರು ವಯೋಮಿತಿ ಸಡಿಲಿಕೆಗಾಗಿ ಸಕ್ಷಮ ಪ್ರಾಧಿಕಾರಿಗಳು ನೀಡಿದ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.
21. ಮಹಿಳಾ ಅಭ್ಯರ್ಥಿಗಳು, ವಿಕಲಚೇತನ ಅಭ್ಯರ್ಥಿಗಳು, ಯೋಜನಾನಿರಾಶ್ರಿತರು ಕನ್ನಡ ಮಾಧ್ಯಮ, ಗ್ರಾಮೀಣ ಅಭ್ಯರ್ಥಿಗಳು ಮತ್ತು ಮಾಜಿಸೈನಿಕರಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದ ಪಕ್ಷದಲ್ಲಿ ಆಯಾ ವರ್ಗಕ್ಕೆ ಸೇರಿದ ಇತರೆ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳಲಾಗುವುದು.
22. ನೇಮಕಾತಿ ಪ್ರಕ್ರಿಯೆಯಲ್ಲಿ ಈ ನೇಮಕಾತಿ ಪ್ರಾಧಿಕಾರವು ನಿಯಮಾವಳಿಗನುಸಾರ ತೆಗೆದುಕೊಳ್ಳುವ ನಿರ್ಧಾರವೇ ಅಂತಿಮ ನಿರ್ಧಾರ.

24/3/22

(ಎಸ್.ಮಹಾಲಕ್ಷ್ಮೀ ನೇರಳೆ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
**Pri. District & Sessions Judge**
**Gadag**

ಪ್ರತಿಯನ್ನು :

1) ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.
2) ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ, ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ವಿನಂತಿ.
3) ನಿರ್ದೇಶಕರು, ಮಾಹಿತಿ ಮತ್ತು ಪ್ರಸಾರ ಇಲಾಖೆ, ಬೆಂಗಳೂರು
4) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಗದಗ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
5) ಜಿಲ್ಲಾ ಉದ್ಯೋಗ ವಿನಿಮಿಯ ಕಛೇರಿ, ಗದಗ.
6) ಗದಗ ಜಿಲ್ಲೆಯ ಎಲ್ಲಾ ಪೀಠಾಸೀನಾಧಿಕಾರಿಗಳು (ಆಡಳಿತ) ಇವರಿಗೆ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು
7) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು.
8) ಈ ನ್ಯಾಯಾಲಯದ ಸೂಚನಾ ಫಲಕಕ್ಕೆ.